ಅ) ಇರಿಗೇಷನ್ ಟ್ರಾಕ್ಟ್ ರಸ್ತೆಗಳನ್ನು ನೀರಾವರಿ ಇಲಾಖೆಗೆ ಯಾವಾಗ ಹಸ್ತಾಂತರಿಸಲಾಗುವುದು?

ಶ್ರೀ ಎಂ. ವೀರಪ್ಪ ಮೊಯ್ಲಿ (ಮುಖ್ಯ ಮಂತ್ರಿಗಳು):

ಅ) ಕರ್ನಾಟಕ ಜಿಲ್ಲಾ ಪರಿಷತ್, ತಾಲ್ಲೂಕು ಪಂಚಾಯತಿ ಸಮಿತಿಗಳು, ಮಂಡಲ ಪಂಚಾಯಿತಿಗಳ ಮತ್ತು ನ್ಯಾಯ ಪಂಚಾಯತಿಗಳ ಅಧಿನಿಯಮ 1983ರನ್ವಯ ಜಿಲ್ಲಾ ಪರಿಷತ್ತಿನ ವ್ಯಾಪ್ತಿಗೆ ವಹಿಸಿರುವಂತಹ ಇರಿಗೇಷನ್ ಟ್ರಾಕ್ಟ್ ರಸ್ತೆಗಳನ್ನು ನೀರಾವರಿ ಇಲಾಖೆಗೆ ಹಸ್ತಾಂತರಿಸುವ ಪ್ರಸ್ತಾವೆ ಸರ್ಕಾರದಲ್ಲಿರುವುದಿಲ್ಲ.

ನೆಲಮಂಗಲ ಟೌನ್ ಪೋಲೀಸ್ ಠಾಣೆಯಲ್ಲಿ ಸಿಬ್ಬಂದಿ ಕೊರತೆ

695 - ಶ್ರೀ ಅಂಜನಮೂರ್ತಿ (ನೆಲಮಂಗಲ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲ ಟೌನ್ ಪೋಲೀಸ್ ಠಾಣೆಯಲ್ಲಿ ಸಿಬ್ಬಂದಿ ವರ್ಗದವರು ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಹೆಚ್ಚುವರಿ ಪೋಲೀಸ್ ಸಿಬ್ಬಂದಿಯನ್ನು ನೇಮಿಸಲು ಸರ್ಕಾರವು ಕೈಗೊಳ್ಳಲಿರುವ ಕ್ರಮವೇನು?

ಶ್ರೀ ಎಂ.ವೀರಪ್ಪ ಮೊಯ್ಲಿ (ಮುಖ್ಯ ಮಂತ್ರಿಗಳು):

ಅ) ಹೌದು.

ಆ) 392 ಕಡಿಮೆ ಸಿಬ್ಬಂದಿ ಇರುವ ಪೋಲೀಸ್ ಠಾಣೆಗಳ ಸಿಬ್ಬಂದಿ ಬಲವನ್ನು ಹಂತ ಹಂತವಾಗಿ ಮೂರು ವರ್ಷಗಳಲ್ಲಿ ಹೆಚ್ಚಿಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ. ಅದರಂತೆ ನೆಲಮಂಗಲ ಟೌನ್ ಪೋಲೀಸ್ ಠಾಣೆಗೆ ಅಧಿಕ ಸಿಬ್ಬಂದಿ ಬಲವನ್ನು 1994-95ನೇ ಸಾಲಿನಲ್ಲಿ ಒದಗಿಸಲಾಗುವುದು.

ನೆಲಮಂಗಲ ಕ್ಷೇತ್ರಕ್ಕೆ ಸೇರಿದ ಶನಿಮಹಾತ್ಮ ಸ್ವಾಮಿ ದೇವಾಲಯವನ್ನು ಪ್ರವಾಸಿಗರ ಕೇಂದ್ರವನ್ನಾಗಿ ಮಾಡುವುದು.

697- ಶ್ರೀ ಅಂಜನಮೂರ್ತಿ (ನೆಲಮಂಗಲ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

ಅ) ನೆಲಮಂಗಲ ಕ್ಷೇತ್ರಕ್ಕೆ ಸೇರಿದ ದೊಡ್ಡ ಬಳ್ಳಾಪುರ ತಾಲ್ಲೂಕು, ಮಧುರೆ ಹೋಬಳಿ, ಕನಸವಾಡಿ ಹತ್ತಿರ ಶ್ರೀ ಶನಿಮಹಾತ್ಮ ಸ್ವಾಮಿ ದೇವಾಲಯವನ್ನು ಪ್ರವಾಸಿಗವ ಕೇಂದ್ರವನ್ನಾಗಿ ಮಾಡಬೇಕೆಂದು ಸರ್ಕಾರಕ್ಕೆ ಮನವಿಗಳು ಒದಗಿಸಿರುವುದು ನಿಜವೇ?

ಆ) ಹಾಗಿದ್ದಲ್ಲಿ ಆ ಸ್ಥಳವನ್ನು ಪ್ರವಾಸಿಕೇಂದ್ರವನ್ನಾಗಿ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ವೀರಪ್ಪ ಮೊಯ್ಲಿ (ಮುಖ್ಯಮಂತ್ರಿಗಳು):

ಅ) . ಹೌದು.

ಆ) ಕನಸವಾಡಿಯನ್ನು ಪ್ರೇಕ್ಷಣೀಯ ಸ್ಥಳವೆಂದು ಗುರುತಿಸಲಾಗಿದೆ. ಈ ಸ್ಥಳವನ್ನು ಕರ್ನಾಟಕ ಪ್ರವಾಸೋದ್ಯಮ ನೀತಿಯಲ್ಲಿ "ಸಿ" ಗುಂಪಿನಲ್ಲಿ ಸೇರಿಸಲಾಗಿದೆ.